ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು

ಆರೋಗ್ಯ ಸೌಧ, 1ನೇ ಮಹಡಿ, ಮಾಗಡಿ ರಸ್ತೆ, ಬೆಂಗಳೂರು-560023

ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/41/2021-22 ದಿನಾಂಕ:01.10.2021

ಇವರಿಗೆ,

1. ಮುಖ್ಯ ಆಯುಕ್ತರು, ಬಿಬಿಎಂಪಿ, ಬೆಂಗಳೂರು.
2. ಎಲ್ಲಾ ಜಿಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾಡಳಿತ ಕಛೇರಿ.

ಮಾನ್ಯರೆ,

ವಿಷಯ: ರಾಜ್ಯದಲ್ಲಿ ಕೋವಿಡ್-19 ಲಸಿಕಾಕರಣ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಅನುಸರಿಸುವ ಕುರಿತು

ಉಲ್ಲೇಖ: 1. ಭಾರತ ಸರ್ಕಾರದ ಪತ್ರ ಸಂಖ್ಯೆ: 2319278/2021/Imm dated 22.09.2021
2. ಮಾಧ್ಯಮಗಳಲ್ಲಿ ಚಲಾವಣೆಗೊಳ್ಳುತ್ತಿರುವ ವೀಡಿಯೋ

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೋವಿಡ್-19 ಲಸಿಕಾಕರಣ ಕಾರ್ಯಕ್ರಮಕ್ಕೆ ಭಾರತ ಸರ್ಕಾರದಿಂದ ಕಾಲ ಕಾಲಕ್ಕೆ ಸಂವಹಿಸಲಾಗುತ್ತಿರುವ ಮಾರ್ಗಸೂಚಿಯನ್ವಯ ರಾಜ್ಯದಲ್ಲಿ ಕೋವಿಡ್-19 ಲಸಿಕಾಕರಣವನ್ನು ಅನುಷ್ಟಾನಗೊಳಸಲು ಜಿಲ್ಲೆಗಳಿಗೆ ತಿಳಸಲಾಗಿರುತ್ತದೆ. ಆದರೆ ಇತ್ತೀಚಿಗೆ ಕೆಲವು ಗ್ರಾಮಗಳಲ್ಲಿ ಫಲಾನುಭವಿಗಳಿಗೆ ಕೋವಿಡ್-19 ಲಸಿಕೆಗಳನ್ನು ಲಸಿಕಾಕರಣ ಕೇಂದ್ರಗಳಲ್ಲಿ ನೀಡದೆ ಇತರೆ ಅನುಮೋದಿಸಿಲ್ಲದ ಸ್ಥಳಗಳಲ್ಲಿ ನೀಡಲಾಗುತ್ತಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಫಲಾನುಭವಿಗಳನ್ನು ಲಸಿಕೆ ಪಡೆಯಲು ಮನವೊಲಿಸಿ ಮನೆ ಹತ್ತಿರದ ಕೋವಿಡ್-19 ಲಸಿಕಾಕರಣ ಕೇಂದ್ರಕ್ಕೆ (ಉದಾಹರಣೆಗೆ: ಶಾಲೆಗಳು, ಸಮುದಾಯ ಭವನಗಳು, ಅಂಗನವಾಡಿ ಕೇಂದ್ರಗಳು ಮತ್ತು ಉಪಕೇಂದ್ರಗಳು) ಸಜ್ಜುಗೊಳಿಸಿ ಮಾರ್ಗಸೂಚಿಯನ್ವಯ ಲಸಿಕಾಕರಣ ನಡೆಸಲು ತಿಳಸಲಾಗಿದೆ.

ಮುಂದುವರೆದು, ಉಲ್ಲೇಖ-1 ರ ಪತ್ರದನ್ವಯ ಯಾವುದೇ ವ್ಯಕ್ತಿಯು ತೀವ್ರವಾದ ಖಾಯಿಲೆಯಿಂದಾಗಿ ಹಾಸಿಗೆ ಹಿಡಿದಿದ್ದರೆ/ ತೀವ್ರವಾದ ಅಂಗವೈಕಲ್ಯತೆಯನ್ನು ಹೊಂದಿದ್ದರೆ ಅಥವಾ ನಿರ್ಬಂಧಿತ ಚಲನಶೀಲತೆ ಹೊಂದಿದ್ದರೆ ಅಂತಹ ಫಲಾನುಭವಿಗಳ ಪಟ್ಟಿ ಮಾಡಿ ಜಿಲ್ಲಾ ಮಟ್ಟದಲ್ಲಿ ಕ್ರೂಢೀಕರಿಸಿ ನಂತರ ಅವರವರ ವಾಸಸ್ಥಳದಲ್ಲಿ ಲಸಿಕಾಕರಣದ ನಂತರದ ಸಂಭಾವ್ಯ ಅಡ್ಡ ಪರಿಣಾಮ (ಎಇಎಫ್‌ಐ) ಮುನ್ನೆಚ್ಚರಿಕೆಯೊಂದಿಗೆ ಮೊಬೈಲ್ ವ್ಯಾಕ್ಸಿನೇಶನ್ ತಂಡಗಳ ಮುಖಾಂತರ ಕೋವಿಡ್-19 ಲಸಿಕಾಕರಣವನ್ನು ಸುಗಮಗೊಳಸುವುದು.

ರಾಜ್ಯವು ಇದುವರೆಗೂ ತಮ್ಮೆಲ್ಲರ ಸಹಕಾರದಿಂದ. ಕೋವಿಡ್-19 ಲಸಿಕಾಕರಣ ಕಾರ್ಯಕ್ರಮದಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದ್ದು, ಇನ್ನು ಮುಂದೆಯೂ ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದವಾಗದಂತೆ ಕಾರ್ಯಕ್ರಮ ಅನುಷ್ಠಾನಗೊಳಸುವ ನಿಟ್ಟಿನಲ್ಲಿ ಕ್ರಮವಹಿಸಲು ಕೋರಲಾಗಿದೆ.

ಅರುಂಧತಿ

ಅಭಿಯಾನ ನಿರ್ದೇಶಕರು
ರಾಷ್ಟ್ರೀಯ ಆರೋಗ್ಯ ಅಭಿಯಾನ

ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಮುಖ್ಯ ಆರೋಗ್ಯಾಧಿಕಾರಿಗಳು (ಸಾರ್ವಜನಿಕ ಆರೋಗ್ಯ), ಬಿಬಿಎಂಪಿ.

3. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು,
4. ಲಸಿಕಾಧಿಕಾರಿಗಳು (ಬಿ.ಬಿ.ಎಂ.ಪಿ)

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ವಿಶೇಷ ಆಯುಕ್ತರು (ಆರೋಗ್ಯ), ಬಿಬಿಎಂಪಿ.
5. ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಛೇರಿ.
6. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
8. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
10. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
11. ಕಛೇರಿ ಪ್ರತಿ